**G7 ಔಟ್‌ರೀಚ್ ಅಧಿವೇಶನವನ್ನು ಉದ್ದೇಶಿಸಿ ಪ್ರಧಾನ ಮಂತ್ರಿ ಭಾಷಣ (ಜೂನ್ 17, 2025)**

ಜೂನ್ 18, 2025

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು ಕನನಾಸ್ಕಿಸ್‌ನಲ್ಲಿ G7 ಶೃಂಗಸಭೆಯ ಔಟ್‌ರೀಚ್ ಅಧಿವೇಶನದಲ್ಲಿ ಭಾಗವಹಿಸಿದ್ದರು. ಅವರು 'ಇಂಧನ ಭದ್ರತೆ: ಬದಲಾಗುತ್ತಿರುವ ಜಗತ್ತಿನಲ್ಲಿ ಪ್ರವೇಶ ಮತ್ತು ಕೈಗೆಟುಕುವಿಕೆಯನ್ನು ಖಚಿತಪಡಿಸಿಕೊಳ್ಳಲು ವೈವಿಧ್ಯೀಕರಣ, ತಂತ್ರಜ್ಞಾನ ಮತ್ತು ಮೂಲಸೌಕರ್ಯ' ಕುರಿತ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಿದರು. ಅವರು ಕೆನಡಾ ಪ್ರಧಾನ ಮಂತ್ರಿ ಶ್ರೀ ಮಾರ್ಕ್ ಕಾರ್ನಿ ಅವರ ಆಹ್ವಾನಕ್ಕಾಗಿ ಧನ್ಯವಾದ ಸಲ್ಲಿಸಿದರು ಮತ್ತು G7 ನ 50 ವರ್ಷಗಳ ಪ್ರಯಾಣವನ್ನು ಗುರುತಿಸಿ ಅಭಿನಂದಿಸಿದರು.

2. ಪ್ರಧಾನಮಂತ್ರಿಯವರು ತಮ್ಮ ಭಾಷಣದಲ್ಲಿ, ಭವಿಷ್ಯದ ಪೀಳಿಗೆ ಎದುರಿಸುವ ಪ್ರಮುಖ ಸವಾಲುಗಳಲ್ಲಿ ಇಂಧನ ಭದ್ರತೆಯೂ ಒಂದು ಎಂದು ಒತ್ತಿ ಹೇಳಿದರು. ಸಮಗ್ರ ಬೆಳವಣಿಗೆಗೆ ಭಾರತದ  ಬದ್ಧತೆಯ ಬಗ್ಗೆ ವಿವರಿಸುತ್ತಾ, ಲಭ್ಯತೆ, ಪ್ರವೇಶ, ಕೈಗೆಟುಕುವಿಕೆ ಮತ್ತು ಸ್ವೀಕಾರಾರ್ಹತೆ ತತ್ವಗಳು ಭಾರತದ ಇಂಧನ ಭದ್ರತೆಯ ವಿಧಾನಕ್ಕೆ ಆಧಾರವಾಗಿವೆ ಎಂದರು. ಭಾರತವು ವಿಶ್ವದಲ್ಲಿ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿದ್ದರೂ, ಇದು ನಿಗದಿತ ಸಮಯಕ್ಕಿಂತ ಮೊದಲೇ ಪ್ಯಾರಿಸ್ ಒಪ್ಪಂದದ ಬದ್ಧತೆಗಳನ್ನು ಯಶಸ್ವಿಯಾಗಿ ಪೂರೈಸಿದೆ ಎಂದು ಅವರು ಒತ್ತಿ ಹೇಳಿದರು. ಸುಸ್ಥಿರ ಮತ್ತು ಹಸಿರು ಭವಿಷ್ಯಕ್ಕಾಗಿ ಭಾರತದ ಬದ್ಧತೆಯ ಬಗ್ಗೆ ಮಾತನಾಡಿದ ಅವರು, ಭಾರತವು ಅಂತಾರಾಷ್ಟ್ರೀಯ ಸೌರ ಮೈತ್ರಿ, ವಿಪತ್ತು ಸ್ಥಿತಿಸ್ಥಾಪಕ ಮೂಲಸೌಕರ್ಯಕ್ಕಾಗಿ ಒಕ್ಕೂಟ, ಜಾಗತಿಕ ಜೈವಿಕ ಇಂಧನಗಳ ಮೈತ್ರಿ, ಮಿಷನ್ ಲೈಫ್ ಮತ್ತು ಒಂದು ಸೂರ್ಯ-ಒಂದು ಜಗತ್ತು-ಒಂದು ಗ್ರಿಡ್‌ನಂತಹ ಹಲವಾರು ಜಾಗತಿಕ ಉಪಕ್ರಮಗಳನ್ನು ಕೈಗೊಂಡಿದೆ ಎಂದರು ಮತ್ತು ಅವುಗಳನ್ನು ಮತ್ತಷ್ಟು ಬಲಪಡಿಸಲು ಅಂತಾರಾಷ್ಟ್ರೀಯ ಸಮುದಾಯಕ್ಕೆ ಕರೆ ನೀಡಿದರು.

3. ವಿಶ್ವದ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ಅನಿಶ್ಚಿತತೆ ಮತ್ತು ಘರ್ಷಣೆಗಳು ಜಾಗತಿಕ ದಕ್ಷಿಣದ ದೇಶಗಳ ಮೇಲೆ ದುರ್ಬಲಗೊಳಿಸುವ ಪರಿಣಾಮ ಬೀರಿವೆ ಎಂದ ಪ್ರಧಾನಮಂತ್ರಿಯವರು, ಜಾಗತಿಕ ದಕ್ಷಿಣದ ಧ್ವನಿಯನ್ನು ವಿಶ್ವ ವೇದಿಕೆಗೆ ಕೇಳುವಂತೆ ಮಾಡುವ ಜವಾಬ್ದಾರಿಯನ್ನು ಭಾರತ ತನ್ನದೆಂದು ತೆಗೆದುಕೊಂಡಿದೆ ಎಂದರು. ಅಂತಾರಾಷ್ಟ್ರೀಯ ಸಮುದಾಯವು ಸುಸ್ಥಿರ ಭವಿಷ್ಯದ ಬಗ್ಗೆ ಗಂಭೀರವಾಗಿದ್ದರೆ ಅದು ಜಾಗತಿಕ ದಕ್ಷಿಣದ ಆದ್ಯತೆಗಳು ಮತ್ತು ಕಳಕಳಿಗಳನ್ನು ಅರ್ಥ ಮಾಡಿಕೊಳ್ಳುವುದು ಮುಖ್ಯವಾಗಿದೆ ಎಂದು ಅವರು ಒತ್ತಿ ಹೇಳಿದರು. ಭದ್ರತಾ ಸವಾಲುಗಳಿಗೆ ಒತ್ತು ನೀಡಿದ ಅವರು, ಭಯೋತ್ಪಾದನೆಯ ವಿರುದ್ಧ ಜಾಗತಿಕ ಹೋರಾಟವನ್ನು ಬಲಪಡಿಸಲು ದೇಶಗಳಿಗೆ ಕರೆ ನೀಡಿದರು. ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತಕ್ಕೆ ಬಲವಾದ ಬೆಂಬಲ ನೀಡಿದ ಜಾಗತಿಕ ಸಮುದಾಯಕ್ಕೆ ಧನ್ಯವಾದಗಳನ್ನು ಅರ್ಪಿಸಿದ ಅವರು,

ಪಹಲ್ಗಾಮ್ ಭಯೋತ್ಪಾದನಾ ದಾಳಿಯು ಕೇವಲ ಭಾರತದ ಮೇಲೆ ನಡೆದ ದಾಳಿಯಾಗಿರದೆ ಸಂಪೂರ್ಣ ಮಾನವತೆಯ ಮೇಲೆ ನಡೆಸಿದ ದಾಳಿಯಾಗಿದೆ ಎಂದು ವ್ಯಾಖ್ಯಾನಿಸಿದರು. ಭಯೋತ್ಪಾದನೆಯನ್ನು ಬೆಂಬಲಿಸುವ ಮತ್ತು ಉತ್ತೇಜಿಸುವ ದೇಶಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಅವರು ಕರೆ ನೀಡಿದರು. ಭಯೋತ್ಪಾದನೆಯನ್ನು ನಿಭಾಯಿಸುವಲ್ಲಿ ಯಾವುದೇ ದ್ವಿಮುಖ ನೀತಿ ಇರಬಾರದು ಮತ್ತು ಭಯೋತ್ಪಾದನೆಯನ್ನು ಬೆಂಬಲಿಸುವವರನ್ನು ಎಂದಿಗೂ ಉಪಚರಿಸಬಾರದು ಎಂದು ಅವರು ಹೇಳಿದರು. ಭಯೋತ್ಪಾದನೆಯನ್ನು ಮಾನವೀಯತೆಗೆ ಗಂಭೀರ ಬೆದರಿಕೆ ಎಂದು ಕರೆದ ಪ್ರಧಾನಿ, ಅಂತಾರಾಷ್ಟ್ರೀಯ ಸಮುದಾಯವು ಚಿಂತನೆಗೆ ತೊಡಗಬೇಕಾದ ಪ್ರಮುಖ ಪ್ರಶ್ನೆಗಳನ್ನು ಮುಂದಿಟ್ಟರು :

-ಭಯೋತ್ಪಾದನೆಗೆ ತಾವು ಗುರಿಯಾಗಿದಾಗ ಮಾತ್ರ ದೇಶಗಳು ಅದರಿಂದ ಉಂಟಾಗುವ ಗಂಭೀರ ಬೆದರಿಕೆಯನ್ನು ಅರ್ಥ ಮಾಡಿಕೊಳ್ಳುತ್ತವೆಯೇ?

-ಭಯೋತ್ಪಾದನೆಯ ಅಪರಾಧಿಗಳು ಮತ್ತು ಅದರ ಬಲಿಪಶುಗಳನ್ನು ಸಮಾನವಾಗಿ ಕಾಣಬಹುದೇ?

-ಜಾಗತಿಕ ಸಂಸ್ಥೆಗಳು ಭಯೋತ್ಪಾದನೆಗೆ ಮೂಕ ಪ್ರೇಕ್ಷಕರಾಗಿರುತ್ತವೆಯೇ?

4. ತಂತ್ರಜ್ಞಾನ, AI ಮತ್ತು ಇಂಧನದ ನಡುವಿನ ಸಂಬಂಧದ ಬಗ್ಗೆ ಕೂಡಾ ಪ್ರಧಾನಮಂತ್ರಿ ಮಾತನಾಡಿದರು. ದಕ್ಷತೆ ಮತ್ತು ನಾವೀನ್ಯತೆಯನ್ನು ಉತ್ತೇಜಿಸಲು AI ಒಂದು ನಿರ್ಣಾಯಕ ಸಾಧನವಾಗಿದ್ದರೂ, ತಂತ್ರಜ್ಞಾನವು ತೀವ್ರ ಶಕ್ತಿಯನ್ನು ಬೇಡುತ್ತದೆ ಹಾಗೂ ಸ್ವಚ್ಛ ಮತ್ತು ಹಸಿರು ತೊಡಗುವಿಕೆಗಳ ಮೂಲಕ ಅದನ್ನು ಹೇಗೆ ಸುಸ್ಥಿರಗೊಳಿಸುವುದು ಎಂಬುದರ ಕುರಿತು ಕಾರ್ಯತಂತ್ರ ರೂಪಿಸುವುದು ಮುಖ್ಯವಾಗಿತ್ತು. ತಂತ್ರಜ್ಞಾನವನ್ನು ಉತ್ತೇಜಿಸಲು ಭಾರತದ ಮಾನವ-ಕೇಂದ್ರಿತ ವಿಧಾನದ ಬಗ್ಗೆ ವಿವರಿಸಿದ ಅವರು, ಪರಿಣಾಮಕಾರಿಯಾಗಿರುವ ಯಾವುದೇ ತಂತ್ರಜ್ಞಾನವು ಸಾಮಾನ್ಯ ಜನರ ಜೀವನಕ್ಕೆ ಮೌಲ್ಯವನ್ನು ತರಬೇಕು ಎಂದರು.  AI ಸಂಬಂಧಿತ ಜಾಗತಿಕ ಆಡಳಿತ ಸಮಸ್ಯೆಗಳನ್ನು ಪರಿಹರಿಸುವುದು AI ನ ಕಳವಳಗಳನ್ನು ನಿಭಾಯಿಸಲು ಮತ್ತು ಕ್ಷೇತ್ರದಲ್ಲಿ ನಾವೀನ್ಯತೆಯನ್ನು ಉತ್ತೇಜಿಸಲು ಪ್ರಮುಖವಾಗಿದೆ ಎಂದು ಅವರು ಸಲಹೆ ನೀಡಿದರು. AI ಯುಗದಲ್ಲಿ ನಿರ್ಣಾಯಕ ಖನಿಜಗಳ ಸುರಕ್ಷಿತ ಮತ್ತು ಸ್ಥಿತಿಸ್ಥಾಪಕ ಪೂರೈಕೆ ಸರಪಳಿಗಳನ್ನು ಹೊಂದುವುದು ಮುಖ್ಯವಾಗಿದೆ ಎಂದು ಅವರು ಒತ್ತಿ ಹೇಳಿದರು. ಭಾರತದಲ್ಲಿ ಹೇರಳವಾಗಿರುವ ಗುಣಮಟ್ಟದ ಮತ್ತು ವೈವಿಧ್ಯಮಯ ಡೇಟಾವು, ಜವಾಬ್ದಾರಿಯುತ AI ಗೆ ನಿರ್ಣಾಯಕವಾಗಿದೆ ಎಂದು ಪ್ರಧಾನಮಂತ್ರಿ ಹೇಳಿದರು.

5. ತಂತ್ರಜ್ಞಾನ ನೇತೃತ್ವದ ಜಗತ್ತು ಸುಸ್ಥಿರ ಭವಿಷ್ಯವನ್ನು ಸಾಕಾರಗೊಳಿಸಲು ದೇಶಗಳ ನಡುವೆ ನಿಕಟ ಸಹಕಾರವನ್ನು ಬಯಸುತ್ತದೆ ಮತ್ತು ಅದನ್ನು ಸಾಧಿಸಲು ಜನರು ಮತ್ತು ಗ್ರಹವನ್ನು ಪ್ರಗತಿಯ ಕೇಂದ್ರದಲ್ಲಿಡಬೇಕು ಎಂದು ಪ್ರಧಾನಿ ಹೇಳಿದರು. ಅಧಿವೇಶನದಲ್ಲಿ ಪ್ರಧಾನಿಯವರ ಭಾಷಣವನ್ನು ಇಲ್ಲಿ ನೋಡಬಹುದು [Link]

ಕನನಾಸ್ಕಿಸ್

ಜೂನ್ 17, 2025